ಉ) *ಹಾಗಿದ್ದಲ್ಲಿ, ಇದರಿಂದ ಬಡರೋಗಿಗಳಿಗೆ ಅನ್ಯಾಯವಾಗುವುದಿಲ್ಲವೇ?*

ಡಾ|| ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ರೂ. 50.00 ಲಕ್ಷಗಳು.

ಇ) ಹೌದು. ಹೆಚ್ಚಾಗಿರುವ ಪ್ರಮಾಣ ರೂ.30.00 ಲಕ್ಷಗಳು.

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.

ಗ್ರಾಮಾಂತರ ಪ್ರದೇಶದ ಪ್ರಾಥಮಿಕ ಶಾಲೆಗಳಲ್ಲಿ ಮಧ್ಯಾಹ್ನದ ಉಪಹಾರ ಯೋಜನೆ

2907 - ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮಧ್ಯಾಹ್ನದ ಉಪಹಾರ ಯೋಜನೆಯನ್ನು ಆರಂಭಿಸಲು ಸರ್ಕಾರ ನಿರ್ಧರಿಸಿದೆಯೇ?

ಆ) ಹಾಗಿದ್ದಲ್ಲಿ, ಇದಕ್ಕೆ ತಗಲುವ ವೆಚ್ಚವೆಷ್ಟು?

ಇ) ಇದಕ್ಕಾಗಿ ವಿಶ್ವಬ್ಯಾಂಕಿನಿಂದ ನೆರವು ಪಡೆಯಲಾಗುತ್ತದೆಯೇ?

ಈ) ಕೇಂದ್ರ ಸರ್ಕಾರವು ಯೋಜನೆಗೆ ಹಣಕಾಸಿನ ನೆರವು ನೀಡುತ್ತದೆಯೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. ಪ್ರಾರಂಭಿಕವಾಗಿ ರಾಜ್ಯದ ಹಿಂದುಳಿದ 6 ಜಿಲ್ಲೆಗಳಾದ ಗುಲ್ಬರ್ಗಾ, ಬೀದರ್, ರಾಯಚೂರು ಬಳ್ಳಾರಿ, ಕೊಪ್ಪಳ ಹಾಗೂ ಚಾಮರಾಜನಗರಗಳಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿದೆ.

ಆ) ಕೇಂದ್ರ ಸರ್ಕಾರವು ನೀಡುವ ಆಹಾರಧಾನ್ಯ ಮತ್ತು ಪಾಕಶಾಲೆಯ ಕಟ್ಟಡದ ವೆಚ್ಚವನ್ನು ಹೊರತುಪಡಿಸಿ ರೂ. 47.25 ಕೋಟಿ ವೆಚ್ಚ ತಗಲುವುದು.

ಇ) ಇಲ್ಲ.

ಈ) ಆರ್ಥಿಕ ನೆರವಿಗಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದೆ.